# Bangalore
# Regional News
# 17.12.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ವಿಧಾನಪರಿಷತ್‌ನಲ್ಲಿಂದು ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕ - ೨೦೨೪ ಮಂಡನೆ

೨. ಇ-ಆಸ್ತಿ ನಿಯಮ ರಾಜ್ಯಾದ್ಯಂತ ವಿಸ್ತರಣೆ- ಪೌರಾಡಳಿತ ಸಚಿವ ರಹೀಂಖಾನ್

೩. ಸಕ್ಕರೆ ಕಾರ್ಖಾನೆಗಳಿಂದ ೩ ಕೋಟಿ ೯೪ ಲಕ್ಷ ರೂಪಾಯಿ ಬಾಕಿ- ಸಚಿವ ಶಿವಾನಂದ ಪಾಟೀಲ್

೪. ಮೊದಲ ಬಾರಿಗೆ ಆಯ್ಕೆಯಾದ ಶಾಸಕರಿಗೆ ಅನುದಾನ ನೀಡುವಂತೆ ಬಿಜೆಪಿ ಶಾಸಕ ಬಿ.ವೈ.ವಿಜಯೇಂದ್ರ ಮನವಿ

೫. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪ್ರಚಾರಕ್ಕಾಗಿ 'ಕನ್ನಡಕ್ಕಾಗಿ ಓಟ' ಮ್ಯಾರಥಾನ್

**<><*<><>*><>**

ವಿಧಾನಪರಿಷತ್‌ನಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರವಾಗಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು, ಕರ್ನಾಟಕ ಹಣಕಾಸು ಸಂಸ್ಥೆಗಳಲ್ಲಿ ಠೇವಣಿದಾರರ ಹಿತಾಸಕ್ತಿ ಸಂರಕ್ಷಣೆ ವಿಧೇಯಕ-೨೦೨೪, ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ವಿಧೇಯಕ-೨೦೨೪, ಬೃಹತ್ ಮಹಾನಗರ ಪಾಲಿಕೆ ವಿಧೇಯಕ-೨೦೨೪, ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ-೨೦೨೪, ಚಾಣಕ್ಯ ವಿಶ್ವವಿದ್ಯಾನಿಲಯ ವಿಧೇಯಕ-೨೦೨೪ ಮತ್ತು ಕರ್ನಾಟಕ ಅಂತರ್ಜಲ ವಿಧೇಯಕ-೨೦೨೪ ಅನ್ನು ಮಂಡನೆ ಮಾಡಿದರು. ಮೊದಲು, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ೨೦೨೪ನೇ ಸಾಲಿನ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ತಿದ್ದುಪಡಿ ವಿಧೇಯಕ-೨೦೨೪ ಅನ್ನು ಪರ್ಯಾಯಲೋಸಬೇಕು ಎಂದು ಸಚಿವ ಕೃಷ್ಣ ಭೈರೇಗೌಡ ಸದನಕ್ಕೆ ಸೂಚಿಸಿದರು. ಈ ವೇಳೆ ವಿಧೇಯಕದ ಪರ್ಯಾಲೋಚನೆಗೆ ಸಭಾಪತಿಯವರು ಅವಕಾಶ ಕಲ್ಪಿಸಿದರು. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ತಿದ್ದುಪಡಿ ವಿಧೇಯಕ ೨೦೨೪ ಅನ್ನು ಜಾರಿಗೊಳಿಸುತ್ತಿರುವುದು ಸ್ವಾಗತಾರ್ಹ ಎಂದು ವಿಪಕ್ಷ ಸದಸ್ಯರು ವಿಧೇಯಕಕ್ಕೆ ಬೆಂಬಲ ನೀಡಿದರು.

**<><*<><>*><>**

ನಗರ ಸ್ಥಳೀಯ ಸಂಸ್ಥೆಗಳಲ್ಲೂ ಬಿಬಿಎಂಪಿ ಮಾದರಿಯಲ್ಲಿ ಎ ಖಾತಾ ಮತ್ತು ಬಿ ಖಾತಾ ಎಂದು ಇ-ಆಸ್ತಿ ನೀಡುವ ನಿಯಮವನ್ನು ಇನ್ನೊಂದು ತಿಂಗಳಿನಲ್ಲಿ ರಾಜ್ಯಾದ್ಯಂತ ವಿಸ್ತರಣೆ ಮಾಡುವುದಾಗಿ ಪೌರಾಡಳಿತ ಸಚಿವ ರಹೀಂಖಾನ್ ವಿಧಾನ ಪರಿಷತ್‌ನಲ್ಲಿಂದು ಘೋಷಿಸಿದ್ದಾರೆ. ಎ ಮತ್ತು ಬಿ ಖಾತಾವನ್ನು ಇ-ಆಸ್ತಿಯನ್ನಾಗಿ ನೀಡುವ ಮಾದರಿಯು ಬಿಬಿಎಂಪಿ ವ್ಯಾಪ್ತಿಯಲ್ಲಿ ಯಶಸ್ವಿಯಾಗಿದೆ. ಇದನ್ನು ಒಂದು ತಿಂಗಳೊಳಗೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗೆ ವಿಸ್ತರಣೆ ಮಾಡಲಿದ್ದೇವೆ. ಈಗಾಗಲೇ ವಿಧಾನಸಭೆಯಲ್ಲಿ ಈ ಕುರಿತ ಕಾಯ್ದೆ ಅಂಗೀಕೃತವಾಗಿದೆ. ಈ ಹೊಸ ನಿಯಮಗಳು ಒಂದು

ತಿಂಗಳೊಳಗೆ ಜಾರಿಗೆ ಬರಲಿವೆ ಎಂದು ತಿಳಿಸಿದರು. ಎ ಮತ್ತು ಬಿ ಖಾತಾವನ್ನು ಇಡೀ ರಾಜ್ಯಕ್ಕೆ ವಿಸ್ತರಿಸುವ ಚಿಂತನೆ ಇದೆ. ಈ ಬಗ್ಗೆ ಸರ್ಕಾರ ಸ್ಪಷ್ಟವಾದ ನಿರ್ಧಾರ ತೆಗೆದುಕೊಳ್ಳಲಿದೆ. ಆದಷ್ಟು ಬೇಗ ಅಧಿಕಾರಿಗಳ ಸಭೆ ಕರೆದು, ಸಮಸ್ಯೆ ಇತ್ಯರ್ಥಪಡಿಸಲಾಗುವುದು ಎಂದು ವಿಧಾನ ಪರಿಷತ್‌ನಲ್ಲಿಂದು ಆಶ್ವಾಸನೆ ನೀಡಿದ್ದಾರೆ.

<><*<><>*><>

ರಾಜ್ಯದಲ್ಲಿ ವಿವಿಧ ಸಕ್ಕರೆ ಕಾರ್ಖಾನೆಗಳಿಂದ ೩ ಕೋಟಿ ೯೪ ಲಕ್ಷ ರೂಪಾಯಿ ಬಾಕಿ ಇದೆ ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ವಿಧಾನ ಪರಿಷತ್‌ನಲ್ಲಿಂದು ಪ್ರಶ್ನೋತ್ತರ ಕಲಾಪದ ವೇಳೆ ಸದಸ್ಯ ಎನ್.ರವಿಕುಮಾರ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಬೀದರ್ ಸಹಕಾರಿ ಕಾರ್ಖಾನೆಯಿಂದ ೮೯ ಲಕ್ಷ ರೂಪಾಯಿ, ಬೀದರ್ ಭವಾನಿ ಶುಗರ್ಸ್ - ೧ ಕೋಟಿ ೮೦ ಲಕ್ಷ ರೂಪಾಯಿ, ವಿಜಯಪುರ ಧ್ಯಾನಯೋಗಿ ಶಿವಕುಮಾರ್ ಸ್ವಾಮೀಜಿ ಶುಗರ್ಸ್ - ೧ ಕೋಟಿ ೨೫ ರೂಪಾಯಿ ಬಾಕಿ ಉಳಿಸಿಕೊಂಡಿದೆ. ಈ ಮೂರೂ ಕಾರ್ಖಾನೆಗಳು ಸ್ಥಗಿತವಾಗಿದ್ದು, ವಸೂಲಾತಿ ಜವಾಬ್ದಾರಿ ನೀಡಲಾಗಿದೆ. ೮೦ ಕಾರ್ಖಾನೆಗಳ ಪೈಕಿ ಕೇವಲ ೩ ಕಾರ್ಖಾನೆಗಳು ಮಾತ್ರ ಬಾಕಿ ಉಳಿಸಿಕೊಂಡಿವೆ ಎಂದು ಮಾಹಿತಿ ನೀಡಿದರು.

<><*<><>*><>

ಮೊದಲ ಬಾರಿ ಆಯ್ಕೆಯಾದ ಶಾಸಕರ ಕ್ಷೇತ್ರಗಳ ಅಭಿವೃದ್ಧಿಗೆ ಅನುದಾನ ಸಿಗುತ್ತಿಲ್ಲ. ಪಕ್ಷಾತೀತವಾಗಿ ಎಲ್ಲಾ ಶಾಸಕರು ತಮಗೆ ಅನುದಾನ ದೊರೆಯುತ್ತಿಲ್ಲ ಎಂಬ ಅಳಲು ಹೇಳಿಕೊಳ್ಳುತ್ತಿದ್ದಾರೆ. ಮುಖ್ಯಮಂತ್ರಿಯವರು ಈಗಲಾದರೂ ಎಚ್ಚೆತ್ತುಕೊಂಡು, ಮೊದಲ ಬಾರಿಗೆ ಆಯ್ಕೆಯಾದ ಶಾಸಕರಿಗೆ ಹೆಚ್ಚಿನ ಅನುದಾನ ನೀಡುವಂತೆ ಬಿಜೆಪಿ ಶಾಸಕ ಬಿ.ವೈ.ವಿಜಯೇಂದ್ರ ವಿಧಾನಸಭೆಯಲ್ಲಿಂದು ಮನವಿ ಮಾಡಿದರು. ಉತ್ತರ ಕರ್ನಾಟಕ ಭಾಗದಲ್ಲಿ ನೀರಾವರಿ ಯೋಜನೆಗಳಿಗೆ ಶಾಶ್ವತ ಪರಿಹಾರ, ಕಬ್ಬು ಹಾಗೂ ತೊಗರಿ ಬೆಳೆಗಾರರ ಸಮಸ್ಯೆಗಳಿಗೆ ಪರಿಹಾರ, ಯುವಕರ ನಿರುದ್ಯೋಗ, ಶಿಕ್ಷಣ, ಆರೋಗ್ಯ, ಕುಡಿಯುವ ನೀರಿನ ಸಮಸ್ಯೆ ಬಗ್ಗೆ ರಾಜ್ಯ ಸರ್ಕಾರ ಹೆಚ್ಚಿನ ಗಮನ ಹರಿಸಬೇಕು ಎಂಬ ಒತ್ತಾಯಿಸಿದರು. ಗ್ರಾಮೀಣ ಭಾಗದ ಸಾರಿಗೆ ಸೌಲಭ್ಯಕ್ಕೆ ಹೆಚ್ಚಿನ ಬಸ್‌ಗಳನ್ನು ಒದಗಿಸಬೇಕು. ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನವನ್ನು ವರ್ಷದಲ್ಲಿ ಮೂರು ವಾರಗಳ ಕಾಲ ನಡೆಸಬೇಕು ಎಂದು ಆಗ್ರಹಿಸಿದರು. ಪ್ರವಾಸೋದ್ಯಮ ಚಟುವಟಿಕೆಗಳಿಗೆ ಹೆಚ್ಚಿನ ಒತ್ತು ನೀಡಬೇಕು. ಬಯಲು ಸೀಮೆ ಪ್ರಾಧಿಕಾರ ರದ್ದು ಮಾಡಿ, ಕಿತ್ತೂರು ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ರಚನೆ ಮಾಡಬೇಕು. ಸಕ್ಕರೆ ಕಾರ್ಖಾನೆಗಳಲ್ಲಿ ತೂಕದಲ್ಲಿ ಭಾರೀ ಮೋಸವಾಗುತ್ತಿದೆ. ಅದನ್ನು ತಡೆಯಲು ಮಾನವ ರಹಿತ ಯಂತ್ರೋಪಕರಣಗಳನ್ನು ಅಳವಡಿಕೆ ಮಾಡಬೇಕು ಎಂದು ಒತ್ತಾಯಿಸಿದರು.

<><*<><>*><>

ಉತ್ತರ ಕರ್ನಾಟಕ ಭಾಗದಲ್ಲೂ ಐಟಿ, ಬಿಟಿಗೆ ಉತ್ತೇಜನ ನೀಡಬೇಕು. ಹುಬ್ಬಳ್ಳಿ- ಅಂಕೋಲ ರೈಲ್ವೆ ಮಾರ್ಗದ ಭೂಸ್ವಾಧೀನವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಬಿಜೆಪಿ ಶಾಸಕ ಮಹೇಶ್ ಟೆಂಗಿನಕಾಯಿ ವಿಧಾನಸಭೆಯಲ್ಲಿಂದು ಮನವಿ ಮಾಡಿದರು. ಕಾಂಗ್ರೆಸ್ ಶಾಸಕ ಅಶೋಕ್ ಮನಗೂಳಿ ಮಾತನಾಡಿ, ಹೊಸ ತಾಲೂಕುಗಳಿಗೆ ಹಾಗೂ ಸವಳು-ಜವಳು ಸಮಸ್ಯೆ ನಿವಾರಣೆಗೆ ವಿಶೇಷ ಅನುದಾನ ನೀಡಬೇಕು ಎಂದರು. ಕಾಂಗ್ರೆಸ್ ಶಾಸಕ ರಾಜಾ ವೇಣುಗೋಪಾಲ್ ನಾಯಕ್ ಮಾತನಾಡಿ, ಉದ್ಯೋಗ

ಹುಡುಕಿಕೊಂಡು ಗುಳೆ ಹೋಗುವುದನ್ನು ತಪ್ಪಿಸಲು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಚ್ಚು ಕೈಗಾರಿಕೆಗಳನ್ನು ಸ್ಥಾಪಿಸಬೇಕು ಎಂಬ ಸಲಹೆ ನೀಡಿದರು.

<><*<><>*><>

ಮಕ್ಕಳ ಆರೋಗ್ಯ, ರಕ್ಷಣೆ, ಶಿಕ್ಷಣಕ್ಕೆ ಸಂಬಂಧಿಸಿದ ವರದಿಗಾರಿಕೆಯಲ್ಲಿ ಪತ್ರಕರ್ತರ ಪಾತ್ರ ಮಹತ್ವದ್ದಾಗಿದೆ ಎಂದು ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಡಿ.ಕುಂಬಾರ ಹೇಳಿದರು. ಹೈದರಬಾದ್‌ನ ಯುನಿಸೆಫ್, ಮೈಸೂರು ಹಾಗೂ ದಾವಣಗೆರೆ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ವಿಭಾಗದ ಸಹಯೋಗದಲ್ಲಿಂದು ದಾವಣಗೆರೆ ವಿಶ್ವವಿದ್ಯಾಲಯ ಆವರಣದ ಶಿವಗಂಗೋತ್ರಿಯಲ್ಲಿ ಪತ್ರಕರ್ತರಿಗಾಗಿ ಹಮ್ಮಿಕೊಂಡಿದ್ದ ಎರಡು ದಿನಗಳ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ದೇಶದಲ್ಲಿಂದು ಮಕ್ಕಳಲ್ಲಿ ಅಪೌಷ್ಟಿಕತೆ ಹೆಚ್ಚಾಗುತ್ತಿದ್ದು, ಶಾಲೆಯಿಂದ ಹೊರಗುಳಿಯುತ್ತಿರುವ ಮಕ್ಕಳ ಸಂಖ್ಯೆ ಕೂಡ ಹೆಚ್ಚಾಗುತ್ತಿದೆ. ಇಂತಹ ಸಾಮಾಜಿಕ ಪಿಡುಗಗಳ ಮೇಲೆ ಬೆಳಕು ಚೆಲ್ಲುವ ಕೆಲಸವನ್ನು ಪತ್ರಕರ್ತರು ಮಾಡಬೇಕಿದೆ ಎಂದು ಹೇಳಿದರು.

ಧ್ವನಿ : ಬಿ.ಡಿ. ಕುಂಬಾರ

ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ, ಕೋಲಾರ, ಹೊಸಪೇಟೆ ಜಿಲ್ಲೆಗಳ ೫೦ ಕ್ಕೂ ಅಧಿಕ ಪತ್ರಕರ್ತರು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

<><*<><>*><>

೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನುಡಿ ಜಾತ್ರೆಗೆ ಸಕ್ಕರೆ ನಗರಿ ಮಂಡ್ಯ ಸಜ್ಜಾಗುತ್ತಿದ್ದು, ಸಮ್ಮೇಳನದ ಪ್ರಚಾರಕ್ಕಾಗಿ ಇಂದು 'ಕನ್ನಡಕ್ಕಾಗಿ ಓಟ' ಎಂಬ ಘೋಷ ವಾಕ್ಯದೊಂದಿಗೆ ಮ್ಯಾರಥಾನ್ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಮ್ಯಾರಥಾನ್ ಸ್ಪರ್ಧೆಗೆ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಚಾಲನೆ ನೀಡಿದರು. ಮತ್ತೊಂದೆಡೆ, ಸಾಹಿತ್ಯ ಸಮ್ಮೇಳನದ ಬಂದೋಬಸ್ತ್ ನಿಟ್ಟಿನಲ್ಲಿ ಪೊಲೀಸ್ ಅಧಿಕಾರಿಗಳೊಂದಿಗೆ ಸಚಿವ ಎನ್.ಚಲುವರಾಯಸ್ವಾಮಿ ಇಂದು ಸಭೆ ನಡೆಸಿದರು.

<><*<><>*><>

ಭೀಮಗಢ ಅರಣ್ಯ ಪ್ರದೇಶದೊಳಗಿ ಇರುವ ಗ್ರಾಮಗಳ ನಿವಾಸಿಗಳಿಗೆ ಸೂಕ್ತ ಪರಿಹಾರ ನೀಡಿ ಹಂತ-ಹಂತವಾಗಿ ಸ್ಥಳಾಂತರಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಭರವಸೆ ನೀಡಿದ್ದಾರೆ. ಅರಣ್ಯ ಇಲಾಖೆಯ ಉನ್ನತಾಧಿಕಾರಿಗಳೊಂದಿಗೆ ತಾಳೇವಾಡಿಗೆ ಭೇಟಿ ನೀಡಿ, ಗ್ರಾಮಸ್ಥರೊಂದಿಗೆ ಸಭೆ ನಡೆಸಿದ ಸಚಿವರು, ಪ್ರತಿ ಕುಟುಂಬಕ್ಕೆ ೧೫ ಲಕ್ಷ ರೂಪಾಯಿ ಪರಿಹಾರ ನೀಡಲು ಸರ್ಕಾರ ಸಿದ್ಧವಿದ್ದು, ಅರಣ್ಯವಾಸಿಗಳು ಸ್ವಯಂ ಪ್ರೇರಿತವಾಗಿ ಸ್ಥಳಾಂತರಕ್ಕೆ ಸಮ್ಮತಿಸಬೇಕು ಎಂದು ಮನವಿ ಮಾಡಿದರು. ಪ್ರಸ್ತುತ ಭೀಮಗಢ ದಟ್ಟಾರಣ್ಯದೊಳಗೆ ಒಟ್ಟು ೧೩ ಜನವಸತಿಗಳಲ್ಲಿ ೭೫೪ ಕುಟುಂಬಗಳಿದ್ದು, ೩ ಸಾವಿರದ ೫೯ ಜನರು ವಾಸಿಸುತ್ತಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು. ಪೂರ್ಣ ಗ್ರಾಮದ ಜನರು ಸ್ಥಳಾಂತರಕ್ಕೆ ಸಮ್ಮತಿಸಿದರೆ, ಅಂತಹ

ಗ್ರಾಮಗಳ ಜನರಿಗೆ ಪುನರ್ವಸತಿ ಪರಿಹಾರ ನೀಡಿ, ಸ್ಥಳಾಂತರಕ್ಕೆ ಕ್ರಮ ವಹಿಸುವಂತೆ ಸಚಿವರು ಇದೇ ವೇಳೆ ಅಧಿಕಾರಿಗಳಿಗೆ ಸೂಚಿಸಿದರು.

**<><*<><>*><>**

ಮಹಾತ್ಮ ಗಾಂಧಿ ಅಧ್ಯಕ್ಷತೆ ವಹಿಸಿಕೊಂಡ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ನಿಮಿತ್ತ ಬೆಳಗಾವಿಯಲ್ಲಿ ಐತಿಹಾಸಿಕ ಸಮಾವೇಶ ನಡೆಸಲಾಗುವುದು ಎಂದು ಎಐಸಿಸಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ ತಿಳಿಸಿದ್ದಾರೆ. ಭಾರತದ ರಾಜಕೀಯ ಇತಿಹಾಸದಲ್ಲಿಯೇ ಬೆಳಗಾವಿ ಕಾಂಗ್ರೆಸ್ ಅಧಿವೇಶನ ಐತಿಹಾಸಿಕ ಪಾತ್ರವಿದೆ. ಬೆಳಗಾವಿಯಲ್ಲಿ ಇದೇ ೨೬ ರಂದು ಎಐಸಿಸಿ ಕಾರ್ಯಕಾರಿಣಿ ಸಭೆ ಹಾಗೂ ೨೭ರಂದು ಬೃಹತ್ ಕಾಂಗ್ರೆಸ್ ಸಮಾವೇಶ ನಡೆಯಲಿದ್ದು, ಸಮಾವೇಶ ನಡೆಯುವ ಸ್ಥಳಕ್ಕೆ ಭೇಟಿ ನೀಡಿ, ಸಿದ್ಧತೆ ಪರಿಶೀಲಿಸುವುದಾಗಿ ಹೇಳಿದ್ದಾರೆ.

**<><*<><>*><>**

ಚಿಂತಾಮಣಿ ನಗರದಲ್ಲಿ ಹೆಚ್ಚುತ್ತಿರುವ ರಸ್ತೆ ಅಪಘಾತಗಳನ್ನು ತಡೆಯಲು ನಗರದ ವಾಣಿಜ್ಯ ಮಳಿಗೆಗಳು ಮತ್ತು ಬೀದಿ ಬದಿ ವ್ಯಾಪಾರಿಗಳು ಒತ್ತುವರಿ ಮಾಡಿಕೊಂಡ ಪಾದಾಚಾರಿ ರಸ್ತೆಗಳನ್ನು ತೆರವು ಮಾಡಬೇಕೆಂದು ಪೌರಾಯುಕ್ತ ಚಲಪತಿ ಮನವಿ ಮಾಡಿದ್ದಾರೆ. ನಗರಸಭೆ ಮತ್ತು ಪೊಲೀಸ್ ಇಲಾಖೆ  ಸಹಯೋಗದಲ್ಲಿ ಚಿಂತಾಮಣಿ ನಗರದಲ್ಲಿ ಹಮ್ಮಿಕೊಂಡಿದ್ದ ಪಾದಚಾರಿ ರಸ್ತೆ ತೆರವು ಕಾರ್ಯಾಚರಣೆ ನಡೆಸಿ, ಮಾತನಾಡಿದ ಅವರು, ವಾಣಿಜ್ಯ ಮಳಿಗೆಗಳು ಮತ್ತು ಬೀದಿ ಬದಿ ವ್ಯಾಪಾರಿಗಳು, ಪಾದಾಚಾರಿ ರಸ್ತೆಗಳನ್ನು ಬಹುತೇಕ ಒತ್ತುವರಿ ಮಾಡಿಕೊಂಡಿರುವ ಪರಿಣಾಮ ಪಾದಾಚಾರಿಗಳ ಸಂಚಾರ ಮತ್ತು ವಾಹನಗಳ ನಿಲುಗಡೆಗೂ ನಿತ್ಯ ಸಮಸ್ಯೆಯಾಗುತ್ತಿದೆ. ಇದರಿಂದ ನಗರದಲ್ಲಿ  ರಸ್ತೆ ಅಪಘಾತ ಪ್ರಕರಣಗಳು ಹೆಚ್ಚುತ್ತಿವೆ ಎಂದರು.  ಈ ಹಿನ್ನೆಲೆಯಲ್ಲಿ  ಪಾದಾಚಾರಿ ರಸ್ತೆ ಒತ್ತುವರಿ ತೆರವಿಗಾಗಿ ಪೊಲೀಸ್ ಇಲಾಖೆ ಮತ್ತು ನಗರಸಭೆ ಜಂಟಿ ಕಾರ್ಯಾಚರಣೆ ಆರಂಭಿಸಿದ್ದು, ತೆರವಿಗೆ ಮೂರು ದಿನಗಳ ಗಡುವು ನೀಡಲಾಗಿದೆ. ಮೂರು ದಿನಗಳ ಒಳಗಾಗಿ ತೆರವು ಮಾಡದಿದ್ದಲ್ಲಿ ನಗರಸಭೆಯೇ ತೆರವುಗೊಳಿಸಿ, ದಂಡ ವಿಧಿಸುವ ಜೊತೆಗೆ, ಒತ್ತುವರಿದಾರರ ವಿರುದ್ಧ ಪ್ರಕರಣವನ್ನೂ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

**<><*<>** ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು **<>*><>**